# Dr. Abdullah Abdullah, Chairman, High Council for National Reconciliation of Afghanistan meets Prime Minister

October 08, 2020

---

## ಅಫ್ಘಾನಿಸ್ತಾನದ ರಾಷ್ಟ್ರೀಯ ಸಂಧಾನದ ಉನ್ನತ ಮಂಡಳಿಯ ಅಧ್ಯಕ್ಷ ಡಾ.ಅಬ್ದುಲ್ಲಾ ಅಬ್ದುಲ್ಲಾ ರವರು ಪ್ರಧಾನಿಯನ್ನು ಭೇಟಿ ಮಾಡುತ್ತಾರೆ

ಅಕ್ಟೋಬರ್ 08, 2020

ಅಫ್ಘಾನಿಸ್ತಾನದ ರಾಷ್ಟ್ರೀಯ ಸಂಧಾನದ ಉನ್ನತ ಮಂಡಳಿಯ ಅಧ್ಯಕ್ಷ ಡಾ.ಅಬ್ದುಲ್ಲಾ ಅಬ್ದುಲ್ಲಾ ರವರು ಇಂದು (ಅಕ್ಟೋಬರ್ 8) ಬೆಳಿಗ್ಗೆ ಪ್ರಧಾನ ಮಂತ್ರಿಯವರನ್ನು ಭೇಟಿಯಾದರು. ನೆರೆಹೊರೆಯ ಪ್ರಥಮ ಸರ್ಕಾರದ ನೀತಿಗೆ ಅನುಗುಣವಾಗಿ, ಭಾರತ ಹಾಗೂ ಅಫ್ಘಾನಿಸ್ತಾನ ನಡುವಿನ ಐತಿಹಾಸಿಕ ಸಂಬಂಧಗಳನ್ನು ಇನ್ನಷ್ಟು ಬಲಪಡಿಸಲು ಭಾರತದ ದೀರ್ಘಕಾಲೀನ ಬದ್ಧತೆಯನ್ನು ಪ್ರಧಾನ ಮಂತ್ರಿಯವರು ಪುನರುಚ್ಚರಿಸಿದರು. ಇಬ್ಬರು ನಾಯಕರು ದ್ವಿಪಕ್ಷೀಯ ಮತ್ತು ಪ್ರಾದೇಶಿಕ ಹಿತಾಸಕ್ತಿಯ ವಿಷಯಗಳ ಬಗ್ಗೆ ಚರ್ಚಿಸಿದರು. ಡಾ. ಅಬ್ದುಲ್ಲಾ ಅಬ್ದುಲ್ಲಾ ರವರು ಅಫಘಾನ್ ಶಾಂತಿ ಪ್ರಕ್ರಿಯೆ ಮತ್ತು ದೋಹಾದಲ್ಲಿ ನಡೆಯುತ್ತಿರುವ ಮಾತುಕತೆಗಳ ಬಗ್ಗೆ ಪ್ರಧಾನ ಮಂತ್ರಿಗೆ ವಿವರಿಸಿದರು.

ಅಫ್ಘಾನಿಸ್ತಾನದೊಂದಿಗೆ ಭಾರತದ ಅಭಿವೃದ್ಧಿ ಸಹಕಾರ ಸೇರಿದಂತೆ ದ್ವಿಪಕ್ಷೀಯ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಡಾ. ಅಬ್ದುಲ್ಲಾ ಅಬ್ದುಲ್ಲಾ ರವರು ಯುಎಸ್ $3 ಬಿಲಿಯನ್ ಅಭಿವೃದ್ಧಿಯ ಬದ್ಧತೆಯನ್ನು ಪ್ರಶಂಸಿಸಿದರು, ಈ ಯೋಜನೆಗಳಿಂದ 34 ಪ್ರಾಂತ್ಯಗಳಲ್ಲಿ ಅಫ್ಘನ್ನರಿಗೆ ಪ್ರಯೋಜನವಾಗುತ್ತಿದೆ.

ಅಫ್ಘಾನಿಸ್ತಾನದಲ್ಲಿ ಸುಸ್ಥಿರ ಶಾಂತಿ ಮತ್ತು ಸಮೃದ್ಧಿಯ ಬಗೆಗಿನ ಭಾರತದ ಬದ್ಧತೆಯನ್ನು ಪ್ರಧಾನ ಮಂತ್ರಿಯವರು ಪುನರುಚ್ಚರಿಸಿದರು ಮತ್ತು ಅಫ್ಘಾನಿಸ್ತಾನದಲ್ಲಿ ಸಮಗ್ರ ಹಾಗೂ ಶಾಶ್ವತ ಕದನ ವಿರಾಮಕ್ಕೆ ಪ್ರಯತ್ನಗಳನ್ನು ಸ್ವಾಗತಿಸಿದರು.

ರಾಷ್ಟ್ರೀಯ ಭದ್ರತಾ ಸಲಹೆಗಾರ ಶ್ರೀ ಅಜಿತ್ ದೋವಲ್ ರವರು ಅಕ್ಟೋಬರ್ 7 ರಂದು ಡಾ.ಅಬ್ದುಲ್ಲಾ ಅಬ್ದುಲ್ಲಾ ರವರನ್ನು ಭೇಟಿ ಮಾಡಿ ಅಫಘಾನ್ ಶಾಂತಿ ಪ್ರಕ್ರಿಯೆ ಮತ್ತು ಅಫ್ಘಾನಿಸ್ತಾನದಾದ್ಯಂತ ಹೆಚ್ಚಿದ ಹಿಂಸಾಚಾರ ಹಾಗೂ ಈ ಪ್ರದೇಶದಲ್ಲಿ ಶಾಂತಿ ಮತ್ತು ಸುರಕ್ಷತೆ ಸೇರಿದಂತೆ ಸಂಬಂಧಿತ ವಿಷಯಗಳ ಬಗ್ಗೆ ಚರ್ಚಿಸಿದರು.

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ರವರು ನಾಳೆ ಅಂದರೆ 9 ಅಕ್ಟೋಬರ್ 2020 ರಂದು ಡಾ.ಅಬ್ದುಲ್ಲಾ ಅಬ್ದುಲ್ಲಾ ರವರನ್ನು ಭೇಟಿ ಮಾಡಲಿದ್ದಾರೆ.

ನವ ದೆಹಲಿ
**ಅಕ್ಟೋಬರ್ 08, 2020**

DISCLAIMER: This is an approximate translation. The original is available in English on MEA's website and may be referred to as the official press release.